# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1] | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 866 |
| 2] | ಮಾನ್ಯ ಸದಸ್ಯರ ಹೆಸರು | : | ಡಾ॥ ಎಂ.ಜಿ.ಮುಳೆ<br>(ವಿಧಾನಸಭೆಯಿಂದ ಚುನಾಯಿತರಾದವರು) |
| 3] | ಉತ್ತರಿಸುವ ದಿನಾಂಕ | : | 13/03/2025 |
| 4] | ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಗೃಹ ಇಲಾಖೆ ಅಧೀನದಲ್ಲಿರುವ ಫೋರೆನ್ಸಿಕ್ ವಿಭಾಗವನ್ನು ಸ್ವತಂತ್ರ ಸಂಸ್ಥೆಯನ್ನಾಗಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ; | ಇಲ್ಲ.<br><br>ನ್ಯಾಯ ವಿಜ್ಞಾನ ಪ್ರಯೋಗಾಲಯವು ಗೃಹ ಇಲಾಖೆಯ ಅಧೀನದಲ್ಲಿರುವ ಪೊಲೀಸ್ ಇಲಾಖೆಯ ಒಂದು ಅಂಗವಾಗಿ ಕಾರ್ಯನಿರ್ವಹಿಸುತ್ತಿರುತ್ತದೆ. |
| ಆ) | ಗೃಹ ಇಲಾಖೆ ಅಧೀನದಲ್ಲಿ ಫೋರೆನ್ಸಿಕ್ ವಿಭಾಗ ಕೆಲಸ ಮಾಡುತ್ತಿರುವುದು ನಿಷ್ಪಕ್ಷಪಾತವಾಗಿ ಸೇವೆ ಸಲ್ಲಿಸಲು ಅಡಚಣೆಯಾಗುವುದಿಲ್ಲವೆ; | ಇಲ್ಲ.<br><br>ಭಾರತ ದೇಶದ ಹಲವು ರಾಜ್ಯಗಳಲ್ಲಿ ನ್ಯಾಯ ವಿಜ್ಞಾನ ಪ್ರಯೋಗಾಲಯಗಳು ಗೃಹ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿವೆ. ಅದರಂತೆ ರಾಜ್ಯದ ನ್ಯಾಯ ವಿಜ್ಞಾನ ಪ್ರಯೋಗಾಲಯವು ನಿಷ್ಪಕ್ಷಪಾತವಾಗಿ ಸೇವೆಯನ್ನು ಸಲ್ಲಿಸುತ್ತಿರುತ್ತದೆ. |
| ಇ) | ಫೋರೆನ್ಸಿಕ್ ವಿಭಾಗದಲ್ಲಿ ಹಳೆ ಪದ್ಧತಿಯನ್ನು ಅನುಸರಿಸುತ್ತಿದ್ದು ಹೊರ ರಾಜ್ಯಗಳಿಗೆ ಕಳುಹಿಸಿ ವರದಿಯನ್ನು ಪಡೆಯುತ್ತಿದ್ದು, ಇರುವುದನ್ನು ಆಧುನೀಕರಣಗೊಳಿಸಿ ನಮ್ಮಲ್ಲೇ ಲ್ಯಾಬೊರೇಟರಿಯನ್ನು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? | ರಾಜ್ಯದಲ್ಲಿ ಕೆಳಕಂಡಂತೆ 01–ರಾಜ್ಯ ನ್ಯಾಯ ವಿಜ್ಞಾನ ಪ್ರಯೋಗಾಲಯ ಮತ್ತು 07–ಪ್ರಾದೇಶಿಕ ನ್ಯಾಯ ವಿಜ್ಞಾನ ಪ್ರಯೋಗಾಲಯಗಳು ಕಾರ್ಯನಿರ್ವಹಿಸುತ್ತಿವೆ:–<br><br>1) ರಾಜ್ಯ ನ್ಯಾಯ ವಿಜ್ಞಾನ ಪ್ರಯೋಗಾಲಯ, ಬೆಂಗಳೂರು.<br>2) ಪ್ರಾದೇಶಿಕ ನ್ಯಾಯ ವಿಜ್ಞಾನ ಪ್ರಯೋಗಾಲಯ, ಮೈಸೂರು.<br>3) ಪ್ರಾದೇಶಿಕ ನ್ಯಾಯ ವಿಜ್ಞಾನ ಪ್ರಯೋಗಾಲಯ, ದಾವಣಗೆರೆ.<br>4) ಪ್ರಾದೇಶಿಕ ನ್ಯಾಯ ವಿಜ್ಞಾನ ಪ್ರಯೋಗಾಲಯ, ಮಂಗಳೂರು.<br>5) ಪ್ರಾದೇಶಿಕ ನ್ಯಾಯ ವಿಜ್ಞಾನ ಪ್ರಯೋಗಾಲಯ, ಕಲಬುರಗಿ.<br>6) ಪ್ರಾದೇಶಿಕ ನ್ಯಾಯ ವಿಜ್ಞಾನ ಪ್ರಯೋಗಾಲಯ, ಬೆಳಗಾವಿ.<br>7) ಪ್ರಾದೇಶಿಕ ನ್ಯಾಯ ವಿಜ್ಞಾನ ಪ್ರಯೋಗಾಲಯ, ಹುಬ್ಬಳ್ಳಿ.<br>8) ಪ್ರಾದೇಶಿಕ ನ್ಯಾಯ ವಿಜ್ಞಾನ ಪ್ರಯೋಗಾಲಯ, ಬಳ್ಳಾರಿ. |

| | | |
|---|---|---|
| | | ರಾಜ್ಯ ನ್ಯಾಯ ವಿಜ್ಞಾನ ಪ್ರಯೋಗಾಲಯದಲ್ಲಿ ಒಟ್ಟು 13 ವಿಭಾಗಗಳು ಕಾರ್ಯನಿರ್ವಹಿಸುತ್ತಿದ್ದು, ಎಲ್ಲಾ ಪ್ರಯೋಗಾಲಯಗಳಲ್ಲಿ ವಾರ್ಷಿಕವಾಗಿ ಸುಮಾರು 35,000 ಪ್ರಕರಣಗಳು ಸ್ವೀಕೃತವಾಗುತ್ತಿದ್ದು, ಎಲ್ಲಾ ಪ್ರಕರಣಗಳನ್ನು ಕರ್ನಾಟಕ ರಾಜ್ಯದ ಲ್ಯಾಬೊರೇಟರಿಯಲ್ಲಿಯೇ ವಿಶ್ಲೇಷಿಸಿ, ವರದಿಯನ್ನು ನೀಡಲಾಗುತ್ತಿದೆ.<br><br>ಕರ್ನಾಟಕ ರಾಜ್ಯದ ವಿಧಿ ವಿಜ್ಞಾನ ಪ್ರಯೋಗಾಲಯವನ್ನು ಈಗಾಗಲೇ ಆಧುನೀಕರಣಗೊಳಿಸಲಾಗಿರುತ್ತದೆ ಮತ್ತು ಎಲ್ಲಾ ಪ್ರಕರಣಗಳನ್ನು ರಾಜ್ಯದಲ್ಲಿರುವ ಅತ್ಯಾಧುನಿಕ ಉಪಕರಣ ಹಾಗೂ ತಂತ್ರಾಂಶಗಳ ಸಹಾಯದಿಂದ ವಿಧಿ ವಿಜ್ಞಾನ ತಜ್ಞರಿಂದ ವಿಶ್ಲೇಷಿಸಿ ವರದಿಯನ್ನು ನೀಡುವ ಸಾಮರ್ಥ್ಯವನ್ನು ಹೊಂದಿರುವುದರಿಂದ, ಪ್ರಸ್ತುತ ಯಾವುದೇ ಪ್ರಕರಣಗಳನ್ನು ಹೊರ ರಾಜ್ಯಗಳಿಗೆ ಕಳುಹಿಸುತ್ತಿಲ್ಲ. |

**ಸಂಖ್ಯೆ: ಹೆಚ್‌ಡಿ 36 ಪಿಓಪಿ 2025**

(ಡಾ॥ ಜಿ.ಪರಮೇಶ್ವರ)
ಗೃಹ ಸಚಿವರು.